ವಿ. ಅನ್ಬುಕುಮಾರ್ ಭಾಆಸೇ
ಮುಖ್ಯ ಚುನಾವಣಾಧಿಕಾರಿ, ಕರ್ನಾಟಕ
ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ, ಸಿ.ಆ.ಸು.ಇ. (ಚುನಾವಣೆಗಳು)

ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ
ಬೆಂಗಳೂರು – 560 001 ದೂರವಾಣಿ: 080–22242042
ಇ–ಮೇಲ್: ceo.karnataka@gmail.com
ಜಾಲತಾಣ: http://ceo.karnataka.gov.in

ಅ.ಸ.ಪತ್ರ ಸಂಖ್ಯೆ: ಸಿಆಸುಇ 90 ಚುಸಿಆ 2026 — 22ನೇ ಜೂನ್, 2026

ಮಾನ್ಯರೇ,

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ, ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗಿರುವ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ (SIR)-2026 ಕಾರ್ಯಕ್ರಮದ ಪ್ರಯುಕ್ತ ಕ್ಷೇತ್ರ ಮಟ್ಟದ ಕಾರ್ಯಗಳು ಅತ್ಯಂತ ಜರೂರಾಗಿ ಮತ್ತು ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವನ್ನು ಕಾಲಮಿತಿಯಲ್ಲಿ ಮುಕ್ತಾಯಗೊಳಿಸಬೇಕಿರುವುದರಿಂದ ವಿವಿಧ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳನ್ನು ಸದರಿ ಕಾರ್ಯಗಳಿಗೆ ನಿಯೋಜಿಸಲಾಗಿದೆ.

ಅದರಂತೆ ಚುನಾವಣಾ ಸಿಬ್ಬಂದಿಗಳು ಹಾಗೂ ಬಿ.ಎಲ್.ಒ.ಗಳು ಪ್ರತಿದಿನ ಮನೆ-ಮನೆಗೆ ಭೇಟಿ ನೀಡಿ ಮತದಾರರ ಭೌತಿಕ ಪರಿಶೀಲನೆ, ಹೊಸ ಮತದಾರರ ನೋಂದಣಿ ಹಾಗೂ ನಮೂನೆಗಳ ಹಂಚಿಕೆ ಮತ್ತು ಸಂಗ್ರಹಣೆಯಂತಹ ಕ್ಷೇತ್ರ ಕಾರ್ಯಗಳಲ್ಲಿ ಸಂಪೂರ್ಣವಾಗಿ ತೊಡಗಿಸಿಕೊಂಡಿದ್ದಾರೆ. ಈ ಕಾರಣದಿಂದಾಗಿ, ಸದರಿ ಅಧಿಕಾರಿಗಳು ಪ್ರತಿದಿನ ಬೆಳಿಗ್ಗೆ ಮತ್ತು ಸಂಜೆ ತಮ್ಮ ಮೂಲ ಇಲಾಖೆ/ಕಚೇರಿಗಳಿಗೆ ಭೇಟಿ ನೀಡಿ ಬಯೋಮೆಟ್ರಿಕ್ ಅಥವಾ ಹಾಜರಾತಿ ಮೊಬೈಲ್ ಆ್ಯಪ್ (Karthavya Attendance App) ಮೂಲಕ ಹಾಜರಾತಿ ದಾಖಲಿಸುವುದು ಪ್ರಾಯೋಗಿಕವಾಗಿ ಅತ್ಯಂತ ಕಠಿಣವಾಗಿದೆ ಮತ್ತು ಇದು ಚುನಾವಣಾ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದ ಪ್ರಗತಿಗೂ ಅಡ್ಡಿಯಾಗುತ್ತಿದೆ ಎಂದು ತಿಳಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆಯ ಕರ್ತವ್ಯದಲ್ಲಿರುವ ಎಲ್ಲಾ ಅಧಿಕಾರಿಗಳು ಹಾಗೂ ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ (BLOs) ಮತದಾರರ ಪಟ್ಟಿ ಪರಿಷ್ಕರಣೆ (SIR)-2026 ಕಾರ್ಯಕ್ರಮದ ಅವಧಿಯವರೆಗೆ ದೈನಂದಿನ ಕಚೇರಿಯ ಬಯೋಮೆಟ್ರಿಕ್ ಮತ್ತು ಕರ್ತವ್ಯ ಆ್ಯಪ್ ಹಾಜರಾತಿಯಿಂದ ತಾತ್ಕಾಲಿಕ ವಿನಾಯಿತಿ ನೀಡಲು ರಾಜ್ಯದ ಎಲ್ಲಾ ಇಲಾಖಾ ಮುಖ್ಯಸ್ಥರಿಗೆ ಸೂಕ್ತ ನಿರ್ದೇಶನ ನೀಡಬೇಕಾಗಿ ಕೋರುತ್ತೇನೆ. ಈ ಅವಧಿಯಲ್ಲಿ ಅವರ ಹಾಜರಾತಿಯನ್ನು ಸಂಬಂಧಪಟ್ಟ ಮತದಾರರ ನೋಂದಣಾಧಿಕಾರಿಗಳು (EROs) ನೀಡುವ ಪ್ರಮಾಣಪತ್ರದ ಆಧಾರದ ಮೇಲೆ ಪರಿಗಣಿಸಬಹುದಾಗಿದೆ.ಈ ಕುರಿತು ಸೂಕ್ತ ಕ್ರಮ ಕೈಗೊಳ್ಳಲು ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಹಾಗೂ ಇಲಾಖೆಗಳಿಗೆ ಆದೇಶ ಹೊರಡಿಸುವಂತೆ ಗೌರವ ಪೂರ್ವಕವಾಗಿ ತಮ್ಮನ್ನು ಕೋರಿದೆ.

ಗೌರವಗಳೊಂದಿಗೆ,

ತಮ್ಮ ವಿಶ್ವಾಸಿ,

(ವಿ. ಅನ್ಬುಕುಮಾರ್)

ಇವರಿಗೆ,
ಡಾ|| ಶಾಲಿನಿ ರಜನೀಶ್ ಭಾ.ಆ.ಸೇ.,
ಸರ್ಕಾರದ ಮುಖ್ಯ ಕಾರ್ಯದರ್ಶಿ,
ಕರ್ನಾಟಕ ಸರ್ಕಾರ,
ಬೆಂಗಳೂರು.

ಪ್ರತಿಯನ್ನು ಮಾಹಿತಿಗಾಗಿ,

1. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು.
2. ಎಲ್ಲಾ ಜಿಲ್ಲೆಯ ಮತದಾರರ ನೋಂದಣಾಧಿಕಾರಿಗಳು.